# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)

## ವಾರ್ಡ್ ಸಮಿತಿ ಸಭೆ, ದಿನಾಂಕ:09-08-2021 ರ ಸಭಾ ನಡವಳ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/20/21-22

ದಿನಾಂಕ: 09-08-2021 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಗಳು.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri. Madhu | Junior Health Inspector |
| 4. | Sri Nagaraj | Tax Inspector |
| 5. | Sri Venkatesh | Horticulture Inspector |
| 6. | Sri G Mahesh | J E Bescom |
| 7. | Sri Suresh | Ward Committee Member |
| 8. | Sri Madhiyarasan | Ward Committee Member |
| 9. | Sri Gopinath | Ward Committee Member |
| 10. | Sri Prabhu | Ward Committee Member |
| 11. | Sri. Syed Ansar Pasha | Ward Committee Member |
| 12. | Sri. Nataraj | Ward Committee Member |
| 13. | Sri Rajan | Ward Committee Member |
| 14. | Sri Purshotham | Ward Committee Member |

ಶ್ರೀ. ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 17-07-2021 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳನ್ನು ಪೂರೈಸಲು ಸಭೆಯಲ್ಲಿ ತಿಳಿಸಿರುತ್ತಾರೆ.

1. ಮೋದಿ ಗಾರ್ಡನ್, 6ನೇ ಅಡ್ಡರಸ್ತೆ, ಬಂಗಾರಗಿರಿ ನಗರ ಹಾಗೂ ಮೋದಿ ಗಾರ್ಡನ್ ಸ್ಲಮ್ ಬಳಿ ಕೆಲವು ಸಾರ್ವಜನಿಕರು ತಮ್ಮ ಶೌಚಾಲಯಗಳಿಂದ ಪೈಪ್‌ಲೈನ್ ಸಂಪರ್ಕವನ್ನು ಯುಜಿಡಿ ಗೆ ನೀಡದೇ ನೇರವಾಗಿ ಮಳೆನೀರು ಕಾಲುವೆಗೆ ಸಂಪರ್ಕ ಕಲ್ಪಿಸಿರುವುದಾಗಿ ಸಾರ್ವಜನಿಕರು ತಿಳಿಸಿದ್ದು, ಇದರಿಂದ ಮಳೆನೀರು ಕಾಲುವೆಯಲ್ಲಿ ಹೆಚ್ಚಿನ ಪ್ರಮಾಣದ ಹೂಳು ತುಂಬಿ ಮಳೆಗಾಲದಲ್ಲಿ ನೀರು ಕಾಲುವೆಯಿಂದ ಹೊರಬಂದು ರಸ್ತೆಯ ಮೇಲೆ ಹರಿಯುತ್ತಿರುವುದಾಗಿ ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ತಿಳಿಸಿರುತ್ತಾರೆ. ಅದರಂತೆ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಗೆ ಸಂಬಂಧಪಟ್ಟ ಶ್ರೀ. ರಾಹುಲ್ ಹಾಗೂ ದಸ್ತಗೀರ್ ಬಾಷಾ ರವರನ್ನು ಜಂಟಿ ಸ್ಥಳ ಪರಿಶೀಲನೆ ಮಾಡಿರುವ ಬಗ್ಗೆ ವರದಿ ನೀಡಲು ಸಂಬಂಧಪಟ್ಟ ಕಾರ್ಯವ್ಯಾಪ್ತಿಯ ಅಭಿಯಂತರರಿಗೆ ಸೂಚಿಸಲಾಯಿತು.

2. ಒಂಟಿ ಮನೆಗಳಿಗೆ ಸಂಬಂಧಪಟ್ಟ ಕಡತವನ್ನು ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಬಳಿ ಚರ್ಚಿಸಿ ಜಂಟಿ ಆಯುಕ್ತರಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಲು ಕಡತವನ್ನು ಸಲ್ಲಿಸಿದೆ.

Scanned with CamScanner

3. ವಾರ್ಡ್ ನಂ.47 ರ ವ್ಯಾಪ್ತಿಯಲ್ಲಿ ಈಗಾಗಲೇ ಅಳವಡಿಸಲಾಗಿರುವ ಸಿಸಿ ಕ್ಯಾಮೆರಾಗಳ ಪೈಕಿ ಕೆಲವು ಕಾರ್ಯನಿರ್ವಹಿಸುತ್ತಿಲ್ಲ ಎಂದು ಸಾರ್ವಜನಿಕರು ಸಭೆಯ ಗಮನಕ್ಕೆ ತಂದಿದ್ದು, ಇದನ್ನು ಸರಿಪಡಿಸುವಂತೆ ಹಾಗೂ ವಾರ್ಡ್ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಕಳ್ಳತನ ಪ್ರಕರಣಗಳಿಗೆ ಕಡಿವಾಣ ಹಾಕಲು ಆಯ್ದ ಕಡೆಗಳಲ್ಲಿ ಸಿ.ಸಿ ಕ್ಯಾಮೆರಾಗಳನ್ನು ಅಳವಡಿಸಲು ಪ್ರಸ್ತಾವನೆ ಸಲ್ಲಿಸಿ ಅನುಮೋದನೆ ದೊರೆತ ಕೂಡಲೇ ಸಿ.ಸಿ ಕ್ಯಾಮೆರಾಗಳನ್ನು ಅವಳವಡಿಸಲು ಕ್ರಮಕೈಗೊಳ್ಳುವಂತೆ ವಾರ್ಡ್ ಸಹಾಯಕ ಇಂಜಿನಿಯರ್ ರವರಿಗೆ ಸೂಚಿಸಲಾಯಿತು.
4. ಸುಜ್ಜನನಗರದ ಸ್ಲಂ ಪ್ರದೇಶಗಳಲ್ಲಿ ಬೋರ್‌ವೆಲ್ ಪೈಪ್‌ಲೈನ್ ಕಾಮಗಾರಿಯನ್ನು ಕೈಗೊಳ್ಳಲು ಸೂಚಿಸಲಾಗಿರುತ್ತದೆ.
5. ಮೋದಿ ಗಾರ್ಡನ್‌ನಿಂದ ಕಾವಲ್‌ಭೈರಸಂದ್ರ ಕಡೆಗೆ ಹೋಗುವ ಹೊಸ ರಸ್ತೆಯಲ್ಲಿ ಇಕ್ಕೆಲಗಳಲ್ಲಿ ಗಿಡಗಳನ್ನು ನೆಡುವಂತೆ ಸಾರ್ವಜನಿಕರ ಆಗ್ರಹದಂತೆ ಕ್ರಮಕೈಗೊಳ್ಳಲು ಅರಣ್ಯ ಇಲಾಖೆ ರವರಿಗೆ ಸೂಚಿಸಲು ನಿರ್ಧರಿಸಲಾಯಿತು.
6. ಒಂಟಿ ಮನೆಗಳ ನಿರ್ಮಾಣಕ್ಕೆ ಸಂಬಂಧಪಟ್ಟಂತೆ ವರಲಕ್ಷ್ಮೀ ನಗರದ ನೆಲ್ಸನ್ ಮಂಡೇಲಾ ಪಾರ್ಕ್ ಬಳಿ ಸ್ಥಳ ಗುರುತಿಸಲಾಗಿದ್ದು, ಸದರಿ ಸ್ಥಳವು ಮಿಲಟರಿ ಕಾಂಪೌಂಡ್‌ಗೆ ಹತ್ತಿರ ಇರುವುದರಿಂದ ಮಿಲಟರಿ ಇಲಾಖೆಯಿಂದ ನಿರಾಪೇಕ್ಷಣಾ (NOC) ಪತ್ರ ನೀಡಲು ಮತ್ತೊಮ್ಮೇ ಮಿಲಟರಿ ಅಧಿಕಾರಿಗಳಿಗೆ ಪತ್ರ ಬರೆಯಲಾಗಿಯೆಂದು ಸಹಾಯಕ ಇಂಜಿನಿಯರ್ ಶ್ರೀ ಯುವಕುಮಾರ್ ರವರು ತಿಳಿಸಿರುತ್ತಾರೆ.
7. ವಾರ್ಡ್ ವ್ಯಾಪ್ತಿಯಲ್ಲಿ ಈಗಾಗಲೇ ಕೊರೆಯಲಾಗಿರುವ ಕೊಳವೆ ಬಾವಿಗಳಿಂದ ನೀರು ಸರಬರಾಜು ಮಾಡಲು ಪೈಪ್‌ಲೈನ್ ಕಾಮಗಾರಿ ಮಾಡಬೇಕಿದ್ದು, ಆದ್ಯತೆಯ ಮೇರೆಗೆ ಸದರಿ ಕಾಮಗಾರಿಯನ್ನು ಪ್ರಸ್ತಾವನೆ ಸಲ್ಲಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಯಿತು.

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

**ಪ್ರತಿಯನ್ನು:**

01. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
02. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
03. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
04. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
05. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
06. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
08 ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
08. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
09. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ಕಛೇರಿ ಕಡತಕ್ಕೆ.

Scanned with CamScanner